(28)

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಹೇಮಲತಾ ನಾಯಕ್ ರವರ 330ನೇ ನಿಯಮದ ಮೇರೆಗಿನ ಗಮನ ಸೆಳೆಯುವ ಸೂಚನೆಗೆ ಉತ್ತರ.**

**ಸೂಚನೆ:**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣಕ್ಕಾಗಿ 2023-24, 2024-25 ಮತ್ತು 2025-26ನೇ ಸಾಲಿನಲ್ಲಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಮೀಸಲಿಟ್ಟ ಅನುದಾನವನ್ನು ರಾಜ್ಯ ಸರ್ಕಾರವು ವಿವಿಧ ಯೋಜನೆಗಳ ಅನುಷ್ಠಾನಕ್ಕಾಗಿ ಬಳಕೆ ಮಾಡಿಕೊಳ್ಳಲು ಉದ್ದೇಶಿಸಿರುವುದರಿಂದ ದಲಿತರಿಗೆ ಅನ್ಯಾಯ ಮಾಡಿದಂತಾಗುತ್ತದೆ. ಪರಿಶಿಷ್ಟರ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನು ಅನ್ಯ ಉದ್ದೇಶಕ್ಕಾಗಿ ಬಳಸುವುದು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯನ್ನು ದುರ್ಬಳಕೆ ಮಾಡಿದಂತಾಗಿ, ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆಯ ಉಲ್ಲಂಘನೆಯಾಗಿರುತ್ತದೆ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಶ್ರೇಯೋಭಿವೃದ್ಧಿಗೆ ಬಳಕೆ ಮಾಡಬೇಕಾದ ಅನುದಾನಕ್ಕೆ ಕೊಕ್ಕೆಹಾಕಿ ಸರ್ಕಾರದ ವಿವಿಧ ಯೋಜನೆಗಳಿಗೆ ಅನುದಾನವನ್ನು ಬಳಕೆ ಮಾಡುವುದರಿಂದ ತಳ ಸಮುದಾಯಗಳ ಅಭಿವೃದ್ಧಿಗೆ ಹಿನ್ನಡೆಯಾಗಿರುತ್ತದೆ. ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಡಿ ಮೀಸಲಿಟ್ಟ ಅನುದಾನವನ್ನು ಯಾವುದಕ್ಕೂ ವರ್ಗಾವಣೆ ಮಾಡುವುದಿಲ್ಲ ಎಂದು ಆಶ್ವಾಸನೆ ನೀಡಿದ ಸರ್ಕಾರ 2023-24, 2024-25 ಮತ್ತು 2025-26ನೇ ಸಾಲಿನಲ್ಲಿ ಒಟ್ಟು 25 ಸಾವಿರ ಕೋಟಿಗಳಿಗೂ ಅಧಿಕ ಮೊತ್ತವನ್ನು ವಿವಿಧ ಯೋಜನೆಗಳ ಅನುಷ್ಠಾನಕ್ಕೆ ವರ್ಗಾವಣೆ ಮಾಡಿರುವುದರಿಂದ ದಲಿತರ ಶ್ರೇಯೋಭಿವೃದ್ಧಿಗೆ ಹಿನ್ನಡೆಯಾಗುತ್ತದೆ. ಅನ್ಯ ಉದ್ದೇಶಕ್ಕೆ ಮತ್ತು ವಿವಿಧ ಯೋಜನೆಗಳ ಅನುಷ್ಠಾನಕ್ಕೆ ಬಳಕೆ ಮಾಡಿರುವ ಹಣವನ್ನು ಮತ್ತೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಯೋಜನೆಯಲ್ಲಿ ವಿನಿಯೋಗ ಮಾಡಲು ಸರ್ಕಾರ ಕ್ರಮ ತೆಗೆದುಕೊಳ್ಳುವಂತೆ ಮತ್ತು ತಳಸಮುದಾಯಗಳಿಗೆ ಸಮುದಾಯಗಳಿಗೆ ಅನ್ಯಾಯವಾಗದಂತೆ ಸೂಕ್ತ ಕ್ರಮವಹಿಸುವ ನಿಟ್ಟಿನಲ್ಲಿ ಸದನದಲ್ಲಿ ಈ ವಿಷಯವನ್ನು ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ:**

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರ ಜನಸಂಖ್ಯೆಗೆ ಅನುಗುಣವಾಗಿ ಅಭಿವೃದ್ಧಿ ಆಯವ್ಯಯದಲ್ಲಿ ಅನುದಾನ ಮೀಸಲಿಡಲು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ 2013 ಅನ್ನು 2014-15ನೇ ಸಾಲಿನಿಂದ ಜಾರಿಗೆ ತರಲಾಗಿದೆ.

2011ರ ಜನಗಣತಿಯ ಪ್ರಕಾರ ಪರಿಶಿಷ್ಟ ಜಾತಿಯವರ ಜನಸಂಖ್ಯೆ 17.15% ಮತ್ತು ಪರಿಶಿಷ್ಟ ಪಂಗಡದವರ ಜನಸಂಖ್ಯೆ 6.95% ಇದ್ದು, ಒಟ್ಟು 24.10% ಆಗುತ್ತದೆ. ಇದರನ್ವಯ ಪ್ರತಿವರ್ಷ ಅಭಿವೃದ್ಧಿ ಆಯವ್ಯಯದಲ್ಲಿ 24.10% ಅನುದಾನವನ್ನು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿ ಹಂಚಿಕೆ ಮಾಡಲಾಗುತ್ತದೆ.

2023-24ನೇ ಸಾಲಿನಲ್ಲಿ ರಾಜ್ಯದ ಅಭಿವೃದ್ಧಿ ಆಯವ್ಯಯವು ರೂ.1.60 ಲಕ್ಷ ಕೋಟಿ ಇದ್ದು, ಅದರಲ್ಲಿ 24.10% ನಂತೆ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅಡಿ ರೂ.39,121.46 ಕೋಟಿ ಅನುದಾನ ಹಂಚಿಕೆ ಮಾಡಲಾಗಿದೆ. 2024-25ನೇ ಸಾಲಿನಲ್ಲಿ ರೂ.39,957.77 ಕೋಟಿ, 2025-26 ನೇ ಸಾಲಿನಲ್ಲಿ ರೂ.42,017.51 ಕೋಟಿಗಳನ್ನು ಹಂಚಿಕೆ ಮಾಡಲಾಗಿರುತ್ತದೆ. ಸದರಿ ಅನುದಾನವನ್ನು ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಜನರ ಅಭಿವೃದ್ಧಿಗಾಗಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಧಿನಿಯಮ 2013 ರಂತೆ ಉಪಯೋಗಿಸಲಾಗುತ್ತಿದ್ದು, ಅನ್ಯ ಉದ್ದೇಶಕ್ಕೆ ಬಳಸಲಾಗುತ್ತಿಲ್ಲ.

ಸದರಿ ಅಧಿನಿಯಮದ ಕಲಂ 2(ಸಿ) ಅಡಿ ಸಾಮಾನ್ಯ ಸ್ಕೀಮ್ ಗಳು ಅಂದರೆ, "ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳನ್ನು ಒಳಗೊಂಡಂತೆ ಎಲ್ಲಾ ಸಾಮಾಜಿಕ ಸಮುದಾಯಗಳಿಗೆ ಪ್ರಯೋಜನವಾಗುವಂತಹ ಇಲಾಖೆಗಳ ವಾರ್ಷಿಕ ಯೋಜನೆಗಳಲ್ಲಿ ಒಳಗೊಂಡಿರುವ ಸ್ಕೀಮ್‌ಗಳು ಎಂದು" ಇರುತ್ತದೆ.

ಸೆಕ್ಷನ್ 7(ಸಿ) ಯಡಿ ``ಸಾಮಾನ್ಯ ಸಾಮಾಜಿಕ ವಲಯದ ಸ್ಕೀಮುಗಳು" ಎಂದರೆ, ಉಪ-ಯೋಜನೆಗಳಲ್ಲಿ ಸೇರಿಸಿರುವ ಶಿಕ್ಷಣ, ಆರೋಗ್ಯ, ಮಹಿಳಾ ಮತ್ತು ಮಕ್ಕಳು, ಕಾರ್ಮಿಕ, ದೈಹಿಕ ವಿಕಲಚೇತನರ ಸ್ಕೀಮುಗಳು. ಅನುಸೂಚಿತ ಜಾತಿಗಳು ಅಥವಾ ಅನುಸೂಚಿತ ಪಂಗಡದ ವ್ಯಕ್ತಿಗಳಿಗೆ ಅಥವಾ ಅನುಸೂಚಿತ ಜಾತಿಗಳು ಅಥವಾ ಅನುಸೂಚಿತ ಪಂಗಡದ ಕುಟುಂಬಗಳಿಗೆ, ಇತರರ ಜೊತೆಯಲ್ಲಿ ಪ್ರಯೋಜನವಾಗುವಂತಿದ್ದರೆ, ಸ್ಕೀಮಿನ ವೆಚ್ಚವನ್ನು, ಎಸ್.ಸಿ/ಎಸ್.ಟಿ ಫಲಾನುಭವಿಗಳ ಜನಸಂಖ್ಯೆಯ ಪ್ರಮಾಣಕ್ಕನುಗುಣವಾಗಿ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅಡಿಯಲ್ಲಿ ಹಂಚಿಕೆ ಮಾಡತಕ್ಕದ್ದು ಮತ್ತು ಲೆಕ್ಕತೋರಿಸತಕ್ಕದ್ದು; ಎಂದು ಇರುತ್ತದೆ.

ಅದರಂತೆ, ಸೆಕ್ಷನ್ 7(ಸಿ) ಪ್ರಕಾರ ಕಾಯ್ದೆಯ ಅನುಷ್ಠಾನದ ಪ್ರಾರಂಭದಿಂದಲೂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಫಲಾನುಭವಿಗಳು ಒಳಗೊಂಡಂತೆ ಎಲ್ಲರಿಗೂ ಪ್ರಯೋಜನವಾಗುವ ಯೋಜನೆಗಳಿಗೆ ಭಾಗಶಃ ಅನುದಾನವನ್ನು ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ರಡಿ ನೀಡಿ ಸದರಿ ಅನುದಾನವನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಫಲಾನುಭವಿಗಳಿಗೆ ಮಾತ್ರ ಉಪಯೋಗಿಸಲಾಗುತ್ತಿದೆ. ಶಿಕ್ಷಣ, ಆರೋಗ್ಯ, ಕೃಷಿ, ತೋಟಗಾರಿಕೆ, ನೀರಾವರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಆರ್.ಡಿ.ಪಿ.ಆರ್, ಯೋಜನಾ, ಇಂಧನ ಇತ್ಯಾದಿ ಇಲಾಖೆಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಫಲಾನುಭವಿಗಳು ಒಳಗೊಂಡಂತೆ ಎಲ್ಲರಿಗೂ ಪ್ರಯೋಜನವಾಗುವ ಸಾಮಾನ್ಯ ಯೋಜನೆಗಳಿಗೆ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನವನ್ನು ಎಸ್.ಸಿ/ಎಸ್.ಟಿ ಫಲಾನುಭವಿಗಳಿಗೆ ಮಾತ್ರ ವಿನಿಯೋಗಿಸುವ ಷರತ್ತಿಗೊಳಪಟ್ಟು ಹಂಚಿಕೆ ಮಾಡಲಾಗುತ್ತಿದೆ. ಪ್ರಮುಖ ಯೋಜನೆಗಳ ವಿವರ ಈ ಕೆಳಗಿನಂತಿದೆ.

1. 10 ಹೆಚ್.ಪಿ ವರೆಗಿನ ಪಂಪ್ ಸೆಟ್‌ಗಳಿಗೆ ವಿದ್ಯುತ್ ಸಹಾಯಧನ
2. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ
3. ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ಯೋಜನೆ
4. ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ
5. ಮುಖ್ಯ ಮಂತ್ರಿ ಸೂಕ್ಷ್ಮ ನೀರಾವರಿ ಯೋಜನೆ

6. ರಾಷ್ಟ್ರೀಯ ಕೃಷಿ ವಿಕಾಸ ಯೋಜನೆ
7. ಕೃಷಿ ಭಾಗ್ಯ
8. ರಾಷ್ಟ್ರೀಯ ಆಹಾರ ಸುರಕ್ಷತೆ ಮಿಷನ್
9. ರಾಷ್ಟ್ರೀಯ ತೋಟಗಾರಿಕಾ ಮಿಷನ್
10. ಸಮಗ್ರ ತೋಟಗಾರಿಕೆ ಅಭಿವೃದ್ಧಿ
11. ಹಾಲು ಉತ್ಪಾದಕರಿಗೆ ಪ್ರೋತ್ಸಾಹಧನ
12. ಮಹಾತ್ಮಾ ಗಾಂಧಿ ಉದ್ಯೋಗ ಖಾತರಿ ಯೋಜನೆ
13. ಸ್ವಚ್ಛ ಭಾರತ ಅಭಿಯಾನ
14. ಗ್ರಾಮೀಣ ಕುಡಿಯುವ ನೀರು ಸರಬರಾಜು ಯೋಜನೆ (ಜಲಜೀವನ್ ಮಿಷನ್)
15. ನಮ್ಮ ಗ್ರಾಮ ನಮ್ಮ ರಸ್ತೆ
16. ಭಾಗ್ಯ ಲಕ್ಷ್ಮಿ
17. ವಿಕಲಚೇತನರ ಅಭಿವೃದ್ಧಿ ಕಾರ್ಯಕ್ರಮಗಳು
18. ಅಂಗನವಾಡಿ ಮಕ್ಕಳಿಗೆ ರಾಷ್ಟ್ರೀಯ ಪೌಷ್ಟಿಕ ಆಹಾರ ಯೋಜನೆ
19. ಶಾಲಾ ಮಕ್ಕಳಿಗೆ ಮಧ್ಯಾಹ್ನದ ಬಿಸಿಯೂಟ ಯೋಜನೆ
20. ಆರ್.ಟಿ.ಇ ಖಾಸಗಿ ಶಾಲೆಗಳ ಶುಲ್ಕ ಮರುಪಾವತಿ.
21. ವಿದ್ಯಾವಿಕಾಸ ಯೋಜನೆ
22. ಸರ್ವ ಶಿಕ್ಷಣ ಅಭಿಯಾನ ಮತ್ತು ರಾಷ್ಟ್ರೀಯ ಮಾಧ್ಯಮಿಕ ಶಿಕ್ಷಣ ಅಭಿಯಾನ.
23. ಅನ್ನಭಾಗ್ಯ ಯೋಜನೆ.
24. ಕಂದಾಯ ಇಲಾಖೆಯ ಮೂಲಕ ವೃದ್ಧಾಪ್ಯ ವೇತನ, ವಿಧವಾ ವೇತನ ಸೇರಿದಂತೆ ವಿವಿಧ ಪಿಂಚಣಿಗಳು.
25. ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿ, ಬಯಲು ಸೀಮೆ ಅಭಿವೃದ್ಧಿ ಮಂಡಳಿ, ಮಲೆನಾಡು ಅಭಿವೃದ್ಧಿ ಮಂಡಳಿ ಇತ್ಯಾದಿ ಮಂಡಳಿಗಳ ಮೂಲಕ ಅನುಷ್ಠಾನ ಮಾಡುವ ಕಾರ್ಯಕ್ರಮಗಳು.

ಇದರಂತೆ, ಬೇರೆ ರಾಜ್ಯಗಳು ಮತ್ತು ಭಾರತ ಸರ್ಕಾರದಲ್ಲಿಯೂ ಸಹ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅನುದಾನವನ್ನು ವಿವಿಧ ಇಲಾಖೆಯ ಸಾಮಾನ್ಯ ಯೋಜನೆಗಳಿಗೂ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅನುದಾನ ಹಂಚಿಕೆ ಮಾಡಿ ಎಸ್.ಸಿ/ಎಸ್.ಟಿ ಜನರಿಗೆ ಸೌಲಭ್ಯ ಒದಗಿಸಲಾಗುತ್ತಿದೆ. ಭಾರತ ಸರ್ಕಾರದ ನೀತಿ ಆಯೋಗದ ಮಾರ್ಗಸೂಚಿಗಳಂತೆ ವಿವಿಧ ಇಲಾಖೆಗಳ ವಿವಿಧ ಯೋಜನೆಗಳಿಗೆ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿ ಅನುದಾನ ಹಂಚಿಕೆ ಮಾಡಲಾಗುತ್ತಿದೆ.

ಸರ್ಕಾರದ ಪ್ರಮುಖ ಕಾರ್ಯಕ್ರಮಗಳಾದ ಗೃಹಲಕ್ಷ್ಮಿ, ಅನ್ನಭಾಗ್ಯ, ಶಕ್ತಿ, ಗೃಹಜ್ಯೋತಿ ಮತ್ತು ಯುವನಿಧಿ ಯೋಜನೆಗಳಿಗೆ ಎಸ್.ಸಿ.ಎಸ್.ಪಿ/ ಟಿ.ಎಸ್.ಪಿಅಡಿ ಭಾಗಶ: ಅನುದಾನವನ್ನು ನೀಡಿ ಸದರಿ ಅನುದಾನವನ್ನು ಎಸ್.ಸಿ/ಎಸ್.ಟಿ ಫಲಾನುಭವಿಗಳಿಗೆ ಮಾತ್ರ ವಿನಿಯೋಗಿಸಲಾಗುತ್ತಿದೆ. ಸದರಿ ಅನುದಾನವನ್ನು ಇತರರಿಗೆ ಉಪಯೋಗಿಸಲು divert ಮಾಡಿರುವುದಿಲ್ಲ.

**2025-26ನೇ ಸಾಲಿನಲ್ಲಿ ಗ್ಯಾರಂಟಿ ಯೋಜನೆಗಳಿಗೆ ಹಂಚಿಕೆ ಮಾಡಿರುವ ಅನುದಾನದ ವಿವರ :**

(ರೂ. ಕೋಟಿಗಳಲ್ಲಿ)

| ಕ್ರ.ಸಂ | ಯೋಜನೆ | SCSP ರಡಿ ಹಂಚಿಕೆ | TSP ರಡಿ ಹಂಚಿಕೆ | General Budget ರಡಿ ಹಂಚಿಕೆ | ಒಟ್ಟು ಹಂಚಿಕೆ |
|---|---|---|---|---|---|
| 1 | ಗೃಹಲಕ್ಷ್ಮಿ | 5,364.00 | 2,074.08 | 21169.92 | 28, 608.00 |
| 2 | ಅನ್ನಭಾಗ್ಯ | 1,156.68 | 514.08 | 4755.24 | 6426.00 |
| 3 | ಶಕ್ತಿ | 1,060.00 | 477.00 | 3763.00 | 5300.00 |
| 4 | ಗೃಹಜ್ಯೋತಿ | 1,818.00 | 808.00 | 7474.00 | 10,100.00 |
| 5 | ಯುವನಿಧಿ | 114.00 | 48.00 | 438.00 | 600.00 |
| | **ಒಟ್ಟು** | **9,512.68** | **3,985.40** | **37600.16** | **51,034.00** |

ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಅನುದಾನವನ್ನು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರ ಅಭಿವೃದ್ಧಿಗೆ ವಿನಿಯೋಗಿಸುತ್ತಿರುವ ಕಾರಣ ಅನ್ಯ ಉದ್ದೇಶಕ್ಕಾಗಿ ಅನುದಾನ ಬಳಸಿರುವುದಿಲ್ಲ. ಆದ್ದರಿಂದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆಯ ಉಲ್ಲಂಘನೆಯ ಪ್ರಶ್ನೆ ಉದ್ಭವಿಸುವುದಿಲ್ಲ.

2023-24ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರ ಹಿತದೃಷ್ಟಿಯಿಂದ ಎಸ್.ಸಿ.ಎಸ್.ಪಿ/ಟಿ.ಎಸ್.ಪಿ ಕಾಯ್ದೆ 2013ರ ಸೆಕ್ಷನ್ 7(ಡಿ) ಯನ್ನು 2023 ರಲ್ಲಿ ರದ್ದುಪಡಿಸಿ ಕಾಯ್ದೆಗೆ ತಿದ್ದುಪಡಿತರಲಾಗಿದೆ.

**ಸಕಇ 52 ಎಸ್‌ಎಲ್‌ಪಿ 2026**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**